ಕಿಮೀ ಉದ್ದ ಗ್ರಾಮೀಣ ರಸ್ತೆಯಾಗಿದ್ದು ಉಳಿದ 63 00 ಕಿಮೀ ಉದ್ದ ಜಿಲ್ಲಾ ಮುಖ್ಯ ರಸ್ತೆಯಾಗಿರುತ್ತದೆ

345 (317) ಶ್ರೀ ಗೋಪಾಲ ಪೂಜಾರಿ ಕೆ (ಬೈಂದೂರು) ಮಾನ್ಯ ಕೃಷಿ ಸಚಿವರು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಅದರಲ್ಲೂ ಮುಖ್ಯವಾಗಿ ಉಡುಪಿ ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳಲ್ಲಿ ಎಷ್ಟು ಜನ ರೈತರು ಆತ್ಮಹತ್ಯೆ ಮಾಡಿಕೊಂಡಿರುತ್ತಾರೆ (ಜಿಲ್ಲಾವಾರು ಮಾಹಿತಿ ನೀಡುವುದು),

ಆ) ಇಂತಹ ಆತ್ಮಹತ್ಯೆಗಳನ್ನು ನಿಲ್ಲಿಸಲು ಸರ್ಕಾರದಿಂದ ಏನಾದರೂ ಕ್ರಮಗಳನ್ನು ತೆಗೆದುಕೊಳ್ಳಲಾಗಿದೆಯೇ,

ಇ) ಹಾಗಿದ್ದಲ್ಲಿ ಆ ಕ್ರಮಗಳು ಯಾವುದು?

ಶ್ರೀ ಬಂಡೆಪ್ಪ ಕಾಶಂಪೂರ್ (ಕೃಷಿ ಸಚಿವರು)

ಅ) ರಾಜ್ಯದಲ್ಲಿ ಕಳೆದ 3 ವರ್ಷದ ಅವಧಿಯಲ್ಲಿ ಒಟ್ಟು 1301 ರೈತರ ಆತ್ಮಹತ್ಯೆ ಪ್ರಕರಣಗಳು ವರದಿಯಾಗಿದ್ದು ಇವುಗಳ ಪೈಕಿ ಉಡುಪಿ ಜಿಲ್ಲೆಯಲ್ಲಿ 4 ಪ್ರಕರಣಗಳು ವರದಿಯಾಗಿದೆ ಜಿಲ್ಲಾವಾರು ರೈತರ ಆತ್ಮಹತ್ಯೆ ವಿವರಗಳನ್ನು ಅನುಬಂಧದಲ್ಲಿ ನೀಡಲಾಗಿದೆ

ಆ) ರೈತರ ಆತ್ಮಹತ್ಯೆ ಪ್ರಕರಣಗಳನ್ನು ತಡೆಗಟ್ಟಲು ಸರ್ಕಾರವು ಸಾಧ್ಯವಾದ ಎಲ್ಲಾ ಕ್ರಮಗಳನ್ನು ತೆಗೆದುಕೊಂಡಿರುತ್ತದೆ

ಇ) ರೈತರ ಆತ್ಮಹತ್ಯೆ ತಡೆಯಲು ಸರ್ಕಾರ ಕೈಗೊಂಡ ಕ್ರಮಗಳು ಇಂತಿವೆ

ಅ) ಶೇ 4ರ ಬಡ್ಡಿ ದರದಲ್ಲಿ ಸಹಕಾರಿ ಸಂಸ್ಥೆಗಳ ಮೂಲಕ ರೈತರಿಗೆ ಸಾಲ ನೀಡುವುದು

ಆ) ಶೇ 75ರ ರಿಯಾಯಿತಿ ದರದಲ್ಲಿ ಸಣ್ಣ ಮತ್ತು ಅತಿ ಸಣ್ಣ ರೈತರಿಗೆ ಬಿತ್ತನೆ ಬೀಜ ವಿತರಿಸುವುದು

ಇ) ಬೆಂಬಲ ಬೆಲೆಗಿಂತ ಮಾರುಕಟ್ಟೆಯಲ್ಲಿ ಕೃಷಿ ಉತ್ಪನ್ನಗಳ ದರವು ಕುಸಿದಲ್ಲಿ ಮಾರುಕಟ್ಟೆ ಮಧ್ಯಪ್ರದೇಶದ ಮೂಲಕ ರೈತರ ಕೃಷಿ ಉತ್ಪನ್ನಗಳ ಖರೀದಿ

ಈ) ಟ್ರಾಕ್ಟರ್, ಪವರ್ ಟಿಲ್ಲರ್‌ಗಳಿಗೆ ಶೇ 50 ರ ರಿಯಾಯಿತಿ ದರದಲ್ಲಿ ವಿತರಣೆ

ಉ) ಎತ್ತು ಮತ್ತು ಬಂಡಿಯನ್ನು ಸಣ್ಣ ಮತ್ತು ಅತಿ ಸಣ್ಣ ರೈತರಿಗೆ ಶೇ 50 ರ ರಿಯಾಯಿತಿಯಲ್ಲಿ ವಿತರಣೆ

ಊ) ಕೃಷಿ ತಾಂತ್ರಿಕತೆಯ ಬಗ್ಗೆ ರೈತರಿಗೆ ತರಬೇತಿ

ಎ) ರಿಯಾಯಿತಿಯಲ್ಲಿ ಹನಿ ನೀರಾವರಿ ಮತ್ತು ತುಂತುರು ನೀರಾವರಿ ಉಪಕರಣಗಳ ವಿತರಣೆ

ಏ) ಸಾಗುವಳಿ ವೆಚ್ಚ ಕಡಿಮೆ ಮಾಡಲು ಸಾವಯವ ಕೃಷಿ ಮತ್ತು ಜೀವಾಣು ಗೊಬ್ಬರ ಪ್ರೊತ್ಸಾಹ

ಐ) ಮಣ್ಣು ಪರೀಕ್ಷೆಯ ಆಧಾರದ ಮೇಲೆ ಮಣ್ಣಿನ ಫಲವತ್ತತೆ ಹೆಚ್ಚಿಸಲು ಕ್ರಮ

ಒ) ರೈತರ ಆತ್ಮಹತ್ಯೆ ಪ್ರಕರಣಗಳು ಒಳಗೊಂಡಿರುವ 6 ಜಿಲ್ಲೆಗಳಾದ ಶಿವಮೊಗ್ಗ, ಚಿತ್ರದುರ್ಗ ಬೆಳಗಾಂ, ಹಾಸನ, ಚಿಕ್ಕಮಗಳೂರು ಮತ್ತು ಕೊಡಗು ಜಿಲ್ಲೆಗಳಿಗೆ ಭಾರತ ಸರ್ಕಾರದ ವಿಶೇಷ ಪ್ಯಾಕೇಜ್ ಇತ್ಯಾದಿ

Districtwise & year wise farmer's suicide cases

Sl No	Name of the Districts	2003-04	2004-05	2005-06	2006-07 [up-Dec 06]	Total
1	Bagalkote	24	6	3	4	37
2	Bangalore Rural	30	6	7	1	44
3	Bangalore Urban	2	0	0	0	2
4	Bidar	32	7	9	11	59
5	Hassan	69	37	26	7	139
6	Chamarajanagar	10	2	2	0	14
7	Haveri	38	9	2	3	52
8	Uttara Kannada	7	0	7	4	18
9	Dharwad	31	9	2	0	42
10	Koppal	20	15	11	14	60
11	Mandya	46	11	0	0	57
12	Chickmagalore	24	22	4	16	66
13	Raichur	5	3	2	2	12

14	Tumkur	41	11	6	11	69
15	Shimoga	50	12	8	11	81
16	Kolar	18	10	3	2	33
17	Mysore	18	1	0	0	19
18	Udupi	3	1	0	0	4
19	Kodagu	12	12	13	10	47
20	Belgaum	41	33	13	20	107
21	Davangere	39	12	5	9	65
22	Bellary	31	11	5	3	50
23	Chitradurga	55	19	12	7	93
24	Gulbarga	18	6	7	3	34
25	Bijapur	22	9	9	10	50
26	D Kannada	9	5	4	3	21
27	Gadag	13	2	3	8	26
	Total	708	271	163	159	1301

369 (314) ಶ್ರೀ ದಯಪ್ರಕಾಶ್ ಹೆಗ್ಗಡೆ ಕೆ (ಬ್ರಹ್ಮಾವರ) : ಮಾನ್ಯ ಸಹಕಾರ ಸಚಿವರು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಶೇಕಡಾ 4ರ ಬಡ್ಡಿ ದರದಲ್ಲಿ ಕೃಷಿ ಸಾಲ ನೀಡಲು ತೆಗೆದುಕೊಂಡ ಮಾನದಂಡವೇನು,

ಆ) ರಾಜ್ಯದಲ್ಲಿ ಇದುವರೆಗೂ ಶೇಕಡಾ 4ರ ಬಡ್ಡಿ ದರದಲ್ಲಿ ಎಷ್ಟು ಜನರಿಗೆ ಹಾಗೂ ಎಷ್ಟು ಮೊಬಲಗನ್ನು ಕೃಷಿ ಸಾಲವಾಗಿ ನೀಡಲಾಗಿದೆ,(ಜಿಲ್ಲಾವಾರು ಮಾಹಿತಿ ನೀಡುವುದು),

ಇ) ಈ ಪೈಕಿ ವಸೂಲಾದ ಮೊಬಲಗು ಎಷ್ಟು?

ಶ್ರೀ ಜಿ ಟಿ ದೇವೇಗೌಡ (ಸಹಕಾರ ಸಚಿವರು)

ಅ) ರೈತರು ಸಹಕಾರಿ ಸಂಸ್ಥೆಗಳಿಂದ ಪಡೆಯುವ ಕೃಷಿ ಸಾಲದ ಮೇಲಿನ ಬಡ್ಡಿಯ ಭಾರವನ್ನು ಕಡಿಮೆ ಮಾಡಿ, ರೈತರಿಗೆ ಸಹಾಯ ಮಾಡಬೇಕೆಂಬ ಉದ್ದೇಶವೇ ಶೇಕಡ 4 ರ ಬಡ್ಡಿ ದರದಲ್ಲಿ ಕೃಷಿ ಸಾಲ ನೀಡುವ ಮಾನದಂಡವಾಗಿರುತ್ತದೆ

ಆ) ರಾಜ್ಯದಲ್ಲಿ ದಿನಾಂಕ 1–4–2006ರಿಂದ 31–12–2006ರವರೆಗೆ ಶೇ 4ರ ಬಡ್ಡಿ ದರದಲ್ಲಿ (ಅಲ್ಪಾವಧಿ, ಮಧ್ಯಮಾವಧಿ ಮತ್ತು ದೀರ್ಘಾವಧಿ